
ಎನ್‌ಪಿಆರ್ ಪರಿಷ್ಕರಣೆಗೆ ಸಂಪುಟ ಅನುಮೋದನೆ | ₹ 8,500 ಕೋಟಿ ಮೀಸಲು

# ಪೌರತ್ವ ತಿದ್ದುಪಡಿ ಕಾಯಿದೆ ಬಳಿಕ ಜನಸಂಖ್ಯಾ ನೋಂದಣಿ ವಿವಾದ


ದೆಹಲಿ: ಪೌರತ್ವ ಕಾಯಿದೆ (ಸಿಎಎ) ಮತ್ತು ರಾಷ್ಟ್ರೀಯ ಪೌರತ್ವ ನೋಂದಣಿ (ಎನ್‌ಆರ್‌ಸಿ) ವಿರುದ್ಧ ದೇಶಾದ್ಯಂತ ಪ್ರತಿಭಟನೆ ನಡೆಯುತ್ತಿರುವ ಬೆನ್ನಲ್ಲೇ ರಾಷ್ಟ್ರೀಯ ಜನಸಂಖ್ಯಾ ನೋಂದಣಿ (ಎನ್‌ಪಿಆರ್) ಪರಿಷ್ಕರಣೆ ಪ್ರಸ್ತಾವನೆಗೆ ಕೇಂದ್ರ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದ್ದು, ಇದು ಮತ್ತೊಂದು ವಿವಾದಕ್ಕೆ ಕಾರಣವಾಗಿದೆ.

ಮಂಗಳವಾರ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಇದಕ್ಕಾಗಿ 8,500 ಕೋಟಿ ರೂ. ಅನುದಾನ ಮೀಸಲಿರಿಸಲಾಗಿದೆ. ಏಪ್ರಿಲ್ 1, 2020ರಿಂದ 20 ಸೆಪ್ಟೆಂಬರ್, 2020ರವರೆಗೆ ಎನ್‌ಪಿಆರ್ ಪ್ರಕ್ರಿಯೆ ನಡೆಯಲಿದ್ದು, ದೇಶದ ಪ್ರತಿ ಮನೆಗೂ ಗಣತಿದಾರರು ಬಯೋಮೆಟ್ರಿಕ್ ಸಾಧನದ ಜತೆ ಬಂದು ದೇಶದ ನಿವಾಸಿಗಳ ಗುರುತಿನ ಡೇಟಾವನ್ನು ಸಂಗ್ರಹಿಸಲಿದ್ದಾರೆ. ಕಳೆದ ಆರು ತಿಂಗಳು ಅಥವಾ ಅದಕ್ಕಿಂತ ಹೆಚ್ಚು ಕಾಲ ಸ್ಥಳೀಯ ಪ್ರದೇಶದಲ್ಲಿ ನೆಲೆಸಿರುವ ವ್ಯಕ್ತಿ ಅಥವಾ ಮುಂದಿನ ಆರು ತಿಂಗಳು ಅಥವಾ ಅದಕ್ಕಿಂತ ಹೆಚ್ಚಿನ ಕಾಲ ಆ ಪ್ರದೇಶದಲ್ಲಿ ವಾಸಿಸಲು ಉದ್ದೇಶಿಸಿರುವ ವ್ಯಕ್ತಿ ಎನ್‌ಪಿಆರ್‌ಗೆ ಅರ್ಹ ಸಾಮಾನ್ಯ ನಿವಾಸಿ ಎಂದು ವ್ಯಾಖ್ಯಾನಿಸಲಾಗಿದೆ. ಸೆನ್ಸಸ್ ಆಫ್ ಇಂಡಿಯಾ 2011ರ ಜತೆಗೆ 2010ರಲ್ಲಿ ರಾಷ್ಟ್ರೀಯ ಜನಸಂಖ್ಯಾ ನೋಂದಣಿಯ ಡೇಟಾ ಸಂಗ್ರಹಿಸಲಾಗಿದೆ. ಸಂಸತ್‌ನಲ್ಲಿ ಪೌರತ್ವ ತಿದ್ದುಪಡಿ ಮಸೂದೆ ಅಂಗೀಕಾರವಾಗುತ್ತಿದ್ದಂತೆಯೇ ಕೇರಳ ಹಾಗೂ ಪಶ್ಚಿಮ ಬಂಗಾಳ ಸರಕಾರಗಳು ಎನ್‌ಪಿಆರ್ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿದ್ದವು. ದೇಶದ ಪ್ರತಿಯೊಬ್ಬ ನಿವಾಸಿಯ ಗುರುತಿನ ಸಮಗ್ರ ಡಾಟಾ ಬೇಸ್ ನಿರ್ಮಿಸುವುದು ಎನ್‌ಪಿಆರ್‌ನ ಉದ್ದೇಶವಾಗಿದೆ.

ಎನ್‌ಪಿಆರ್ ಕಾರ್ಯಕ್ರಮವು ಎನ್‌ಆರ್‌ಸಿ ಯೋಜನೆಯ ಪೀಠಿಕೆ ಎಂದು ವ್ಯಾಖ್ಯಾನಿಸಲಾಗುತ್ತಿದ್ದು, ಆ ಕಾರಣದಿಂದ ಭಾರಿ ವಿರೋಧ ಮತ್ತು ಟೀಕೆಗಳು ವ್ಯಕ್ತವಾಗಿವೆ. ಆದರೆ ಎನ್‌ಪಿಆರ್ ಅಂಕಿ ಅಂಶಗಳನ್ನು ಎನ್‌ಆರ್‌ಸಿಗೆ ಬಳಸುವ ಯಾವುದೇ ಉದ್ದೇಶ ಇಲ್ಲ ಎಂದು ಕೇಂದ್ರ ಗೃಹ ಸಚಿವಾಲಯದ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.



ಮಂಗಳವಾರ ನಡೆದ ಸಂಪುಟ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ ಮತ್ತಿತರರು.



ಎನ್‌ಪಿಆರ್‌ಗೂ ಎನ್‌ಆರ್‌ಸಿಗೂ ಯಾವುದೇ ಸಂಬಂಧವಿಲ್ಲ. ದೇಶದ ನಿಜವಾದ ನಾಗರಿಕರನ್ನು ಗುರುತಿಸಲು ಎನ್‌ಆರ್‌ಸಿ ಜಾರಿಯಾಗಿದ್ದರೆ ಜನಗಣತಿಗೆ ಪೂರಕವಾಗಿ ದೇಶದ ಜನರ ದತ್ತಾಂಶ ಸಂಗ್ರಹಿಸಲು ಎನ್‌ಪಿಆರ್ ಜಾರಿಯಾಗುತ್ತಿದೆ.

– ಅಮಿತ್ ಶಾ ಕೇಂದ್ರ ಗೃಹ ಸಚಿವ

## ಇತರ ನಿರ್ಧಾರಗಳು

- ಭೂ, ವಾಯು, ನೌಕಾದಳ ಮತ್ತು ಪ್ರಧಾನಿ ನಡುವಿನ ಸೇತುವೆಯಾಗಲಿದೆ ಸಿಡಿಎಸ್ ಹುದ್ದೆ ಸೃಷ್ಟಿ
- ರೈಲ್ವೆ ಮಂಡಳಿಯನ್ನು ಪುನರ್‌ರಚಿಸಲು ಹಾಗೂ ಎಂಟು ರೈಲ್ವೆ ನಾಗರಿಕ ಸೇವೆಗಳನ್ನು ವಿಲೀನಗೊಳಿಸಲು ಒಪ್ಪಿಗೆ

## ಕೇಳಲಾಗುವ ವಿವರಗಳಿವು

ಹೆಸರು, ಮನೆಯ ಯಜಮಾನನ ಜತೆ ಇರುವ ಸಂಬಂಧ, ತಂದೆಯ ಹೆಸರು, ತಾಯಿಯ ಹೆಸರು, ಸಂಗಾತಿಯ ಹೆಸರು (ಮದುವೆಯಾಗಿದ್ದಲ್ಲಿ), ಲಿಂಗ, ಹುಟ್ಟಿದ ದಿನಾಂಕ, ವೈವಾಹಿಕ ಸ್ಥಿತಿ, ರಾಷ್ಟ್ರೀಯತೆ, ವ್ಯಕ್ತಿಯ ಪ್ರಸ್ತುತ ವಿಳಾಸ, ಶಾಶ್ವತ ವಿಳಾಸ, ಶೈಕ್ಷಣಿಕ ಅರ್ಹತೆ, ಉದ್ಯೋಗದ ವಿವರವನ್ನು ನೀಡಬೇಕಾಗುತ್ತದೆ.

## ಏನಿದು ಎನ್‌ಪಿಆರ್?

ದೇಶದ ಜನಗಣತಿಗೆ ಪೂರಕವಾದ ಪ್ರಕ್ರಿಯೆಯೇ ಎನ್‌ಪಿಆರ್. 1955ರ ಪೌರತ್ವ ಕಾಯಿದೆ ಮತ್ತು 2003ರ ಪೌರತ್ವ ನಿಯಮದ ಅಡಿಯಲ್ಲಿ ಈ ಗಣತಿ ನಡೆಯಲಿದೆ. ದೇಶದ ಯಾವುದೇ ಪ್ರದೇಶದಲ್ಲಿ 6 ತಿಂಗಳು ಅಥವಾ ಅದಕ್ಕಿಂತ ಹೆಚ್ಚು ಅವಧಿ ವಾಸವಾಗಿರುವವರು ರಾಷ್ಟ್ರೀಯ ಜನಸಂಖ್ಯಾ ನೋಂದಣಿಯಲ್ಲಿ ತಮ್ಮ ಹೆಸರನ್ನು ಕಡ್ಡಾಯವಾಗಿ ನೋಂದಾಯಿಸಿಕೊಳ್ಳಬೇಕಾಗುತ್ತದೆ. ಬಯೋಮೆಟ್ರಿಕ್ ಯಂತ್ರದ ಮೂಲಕ ಜನರ ಗುರುತು ಪಡೆಯಲಾಗುತ್ತದೆ. ದೇಶದ ಪ್ರತಿ ಪ್ರಜೆಯ ಸಮಗ್ರ ಗುರುತಿನ ದತ್ತಾಂಶಗಳನ್ನು ಸೃಷ್ಟಿಸಲು ಈ ಎನ್‌ಪಿಆರ್ ಪ್ರಕ್ರಿಯೆ ನಡೆಸಲಾಗುತ್ತದೆ.

## ಏನೇನು ಸಂಗ್ರಹಿಸಲಾಗುತ್ತದೆ?

ಈ ದತ್ತಾಂಶ ಸಂಗ್ರಹದಲ್ಲಿ ಆಧಾರ್ (ಆಧಾರ್ ಮಾಹಿತಿ ಕಡ್ಡಾಯವಲ್ಲ), ಮೊಬೈಲ್ ನಂಬರ್, ಪಾನ್‌ಕಾರ್ಡ್, ಡ್ರೈವಿಂಗ್ ಲೈಸೆನ್ಸ್, ವೋಟರ್ ಐಡಿ, ಪಾಸ್‌ಪೋರ್ಟ್ ನಂಬರ್ ಸಂಗ್ರಹಿಸಲಾಗುತ್ತದೆ.

## ಡೇಟಾ ಸಂಗ್ರಹ ಉದ್ದೇಶ

ಎನ್‌ಪಿಆರ್ ಡೇಟಾದ ಡೇಟಾಬೇಸ್ ಸುರಕ್ಷಿತವಾಗಿದ್ದು, ಆಯ್ದ ಕೆಲ ಮಂದಿಗೆ ಮಾತ್ರ ಈ ಡೇಟಾ ಬಳಕೆ ಮಾಡಲು ಅನುಮತಿ ನೀಡಲಾಗುತ್ತದೆ. ಸರಕಾರಿ ಯೋಜನೆ ದುರುಪಯೋಗ ತಪ್ಪಿಸಲು ಮತ್ತು ಆಂತರಿಕ ಭದ್ರತೆಗಾಗಿ ಈ ರಾಷ್ಟ್ರೀಯ ಜನಸಂಖ್ಯಾ ನೋಂದಣಿ ಮಾಡಲಾಗುತ್ತದೆ ಎಂದು ಕೇಂದ್ರ ಸರಕಾರ ತನ್ನ ನಿರ್ಧಾರವನ್ನು ಸಮರ್ಥಿಸಿಕೊಂಡಿದೆ.